ದಿನಾಂಕ: 07.08.2021ರಂದು ಬೆಳಿಗ್ಗೆ 10.30 ಗಂಟೆಗೆ ಶಿವನಗರ ವಾರ್ಡ್ ನಂ. 107 ರಲ್ಲಿ ನೋಡಲ್ ಅಧಿಕಾರಿಯವರಾದ ಶ್ರೀ ಲಿಂಗಣ್ಣ ಗುಂಡಳ್ಳಿ, ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಪೂಜಾರಪ್ಪ, ಸಹಾಯಕ ಅಭಿಯಂತರರು, ವಾರ್ಡ್ ನಂ. 107 ಶಿವನಗರ [ಪ್ರಭಾರ]
2. ಶ್ರೀ ಶಿವಕುಮಾರಯ್ಯ, ಹಿರಿಯ ಆರೋಗ್ಯ ಪರಿವೀಕ್ಷಕರು
3. ಶ್ರೀ ಹನಿಕೇರ್, ಕಿರಿಯ ಅಭಿಯಂತರರು
4. ಶ್ರೀ ರಘು, ಕಿರಿಯ ಆರೋಗ್ಯ ಪರಿವೀಕ್ಷಕರು,
5. ಶ್ರೀ ಹರೀಶ್, ವಾರ್ಡ್ ಮಾರ್ಷಲ್,
6. ಶ್ರೀ ವಿಜಯಕುಮಾರ್, ಸದಸ್ಯರು

ಶ್ರೀ ಪೂಜಾರಪ್ಪ, ಸಹಾಯಕ ಕಾರ್ಯದರ್ಶಿಗಳು ಹಾಗೂ ಸಂಚಾಲಕರು, ವಾರ್ಡ್ ನಂ. 107ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಈ ಕೆಳಗಿನ ಅಂಶಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

1. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಸಭೆಯಲ್ಲಿ ಕಳೆದ 3 ಸಭೆಯಲ್ಲಿ ವಾರ್ಡ್ ಕಮಿಟಿ ಸಭೆಗೆ ಗೈರು ಹಾಜರಾದ ಪಟ್ಟಿ ತಯಾರಿಸಿ, ಅವರಿಗೆ ನೋಟೀಸ್ ನೀಡಿ ಅದರ ಪ್ರತಿಯನ್ನು ಹಿರಿಯ ಅಧಿಕಾರಿಗಳಿಗೆ ಸಲ್ಲಿಸುವಂತೆ ಸೂಚಿಸಿದರು.
2. ನೋಡಲ್ ಅಧಿಕಾರಿಗಳು, ವಾರ್ಡಿನಲ್ಲಿ ಒಣಗಿರುವ ಮತ್ತು ಕಡಿದಿರುವ ಮರಗಳ ಕೊಂಬೆಗಳನ್ನು ತೆರವುಗೊಳಿಸುವಂತೆ ಸೂಚಿಸಿದರು. ಸಭೆಯಲಿದ್ದ ಸದಸ್ಯರು ಹಾಗೂ ನೋಡಲ್ ಅಧಿಕಾರಿಗಳು ರಸ್ತೆಯಲ್ಲಿ ಬಿದ್ದಿರುವ ಮರಗಳ ಕೊಂಬೆಗಳನ್ನು ತೆರವುಗೊಳಿಸಲು ವಿಳಂಭ ಮಾಡುತ್ತಿರುವ ಬಗ್ಗೆ ಚರ್ಚಿಸಲಾಯಿತು. ಇದಕ್ಕೆ ಉತ್ತರವಾಗಿ ವಾರ್ಡಿನ ಅಭಿಯಂತರರಿಗೆ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸುವಂತೆ ತಿಳಿಸಿದರು
3. ಬೆಂಗಳೂರು ನೀರು ಮತ್ತು ಒಳಚರಂಡಿ ಮಂಡಳಿಯವರು ಯಾವುದೇ ಸಭೆಗೆ ಹಾಜರಾಗಿರುವುದಿಲ್ಲವೆಂದು ಹಲವು ಭಾರಿ ದೂರವಾಣಿ ಮುಖ್ಯಾಂತರ ಸಂಪರ್ಕಿಸಿದರು ಸಹ ಸಭೆಗೆ ಹಾಜರಾಗಿರುವುದಿಲ್ಲವೆಂದು ಚರ್ಚಿಸುವ ಸಮಯದಲ್ಲಿ ಇಲಾಖಾ ವತಿಯಿಂದ ವಾಟರ್ ಪರಿವೀಕ್ಷಕರು ಹಾಜರಾಗಿದ್ದು, ಕೆಲಸ ಭಾಗಗಳಲ್ಲಿ ಮ್ಯಾನ್ ಹೋಲ್ ಮತ್ತು ನೀರಿಗೆ ಸಂಬಂಧಿಸಿದ ಕೊಳವೆಗಳು ಹೊಡೆದು ಹೋಗಿ ಅಲ್ಲಲ್ಲಿ ನೀರು ಸೋರಿಕೆಯಾಗಿ ಉಪಯೋಗಿಸಲು ಬಹಳ ಸಮಸ್ಯೆಯಾಗಿರುತ್ತದೆ ಎಂದು ಸಭೆಯಲ್ಲಿ ಚರ್ಚಿಸಿದಾಗ ಮುಂದಿನ ದಿನಗಳಲ್ಲಿ ಈ ಎಲ್ಲಾ ನ್ಯೂನತೆಗಳನ್ನು ಸರಿಪಡಿಸುತ್ತೇವೆ ಎಂದು ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ.
4. ಸದಸ್ಯರು ಮಾತನಾಡುತ್ತಾ, ಶಿವನಗರ 8ನೇ ಮುಖ್ಯ ರಸ್ತೆಯಲ್ಲಿ ಬೈರಪ್ಪ ಎನ್ ಕ್ಲೇವ್ ಎದುರು ಇರುವ ಪಾದಚಾರಿ ಮಾರ್ಗದ ಅಡೆ ತಡೆಗಳ ಬಗ್ಗೆ ಚರ್ಚಿಸಲಾಯಿತು. ನೋಡಲ್ ಅಧಿಕಾರಿಗಳು ಸದರಿ ರಸ್ತೆಯಲ್ಲಿರುವ ಬೈರಪ್ಪ ಎನ್ ಕ್ಲೇವ್ ರವರ ಸ್ವತ್ತಿನ ಖಾತಾ ನೀಡುವಂತೆ ಕಂದಾಯ ಇಲಾಖೆಗೆ ತಿಳಿಸಿದರು.

ಪು.ತಿ.ನೋ.

Scanned by CamScanner

5. ವಾರ್ಡ್ ವ್ಯಾಪ್ತಿಯಲ್ಲಿ ಒ.ಎಫ್.ಸಿ. ಕೇಬಲ್‌ಗಳು ಮರದಿಂದ ಕೆಳಗೆ ಬಿದ್ದು ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿದೆ ಎಂದು ಸಾರ್ವಜನಿಕರು ಸಭೆಯಲ್ಲಿ ತಿಳಿಸಿದರು. ಈ ಬಗ್ಗೆ ಸಹಾಯಕ ಅಭಿಯಂತರರು ತೆರವುಗೊಳಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

6. ನೋಡಲ್ ಅಧಿಕಾರಿಗಳು, ಎಸ್.ಎ.ಎಸ್. ಇದರ ಬಗ್ಗೆ ಕಂದಾಯ ಅಧಿಕಾರಿಗಳ ಜೊತೆ ಚರ್ಚಿಸಿ, ಅದರ ಬಗ್ಗೆ ಕ್ರಮ ವಹಿಸುವಂತೆ ಸೂಚಿಸಿದರು.

ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 107

ಸಹಿ/-
ಶ್ರೀ ಲಿಂಗಣ್ಣ ಗುಂಡಪ್ಪ
ನೋಡಲ್ ಅಧಿಕಾರಿಗಳು

Scanned by CamScanner